**ಮಾನ್ಯ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳಾದ ಶ್ರೀ ರಾಮೋಜಿ ಗೌಡ ~~ಮತ್ತು ಶ್ರೀ ಡಿ.ಟಿ.ಶ್ರೀನಿವಾಸ್(ಡಿ.ಟಿ.ಎಸ್)~~ ಇವರು ನಿಯಮ-73 ಮತ್ತು 330 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ :-**

**ಪ್ರಶ್ನೆ**

ಶಾಲೆಗಳ ಆವರಣದಲ್ಲಿರುವ ಶೌಚಾಲಯಗಳನ್ನು ಸ್ವಚ್ಛಗೊಳಿಸಲು ವಿದ್ಯಾರ್ಥಿಗಳನ್ನು ಬಳಸುವುದನ್ನು ನಿಷೇಧಿಸಿ ಸುತ್ತೋಲೆ ಹೊರಡಿಸಿದೆ. "ಶಾಲಾ ವಿದ್ಯಾರ್ಥಿಗಳು ಶೈಕ್ಷಣಿಕ, ಪಠೇತರ ಮತ್ತು ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸಬೇಕು. ಶೌಚಾಲಯಗಳ ಸ್ವಚ್ಛತೆ ಮತ್ತು ನಿರ್ವಹಣೆಯಿಂದ ವಿದ್ಯಾರ್ಥಿಗಳನ್ನು ದೂರವಿಡುವುದು ಅಧಿಕಾರಿಗಳು, ಪ್ರಾಂಶುಪಾಲರು, ಶಿಕ್ಷಕರು ಮತ್ತು ಶಾಲಾ ಸಿಬ್ಬಂದಿಯ ಜವಾಬ್ದಾರಿಯಾಗಿದೆ ಎಂದು ಸುತ್ತೋಲೆಯಲ್ಲಿ ತಿಳಿಸಲಾಗಿದ್ದರೂ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಶೌಚಾಲಯಗಳ ನಿರ್ವಹಣೆಗೆ ಇಲಾಖೆಯಿಂದ ಅನುದಾನ ಬಿಡುಗಡೆ ಮಾಡಲಾಗುತ್ತಿದ್ದರೂ, ಶಾಲೆಗಳಲ್ಲಿ ವಿದ್ಯಾರ್ಥಿಗಳಿಂದ ಶೌಚಾಲಯಗಳ ನಿರ್ವಹಣೆ ಮಾಡಿಸುತ್ತಿರುವ ಬಗ್ಗೆ ಪ್ರಸ್ತಾಪಿಸುವುದು.

**ಉತ್ತರ:-**

- 2021-22ರಿಂದ 2024-25ರವರೆಗೆ ಶೌಚಾಲಯ ಹಾಗೂ ಇತರೆ ಶಾಲಾ ನಿರ್ವಹಣೆಗೆ ಈ ಕೆಳಕಂಡಂತೆ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ.

| ಕ್ರ ಸಂ | ವರ್ಷ | ಬಿಡುಗಡೆಯಾದ ಅನುದಾನ ರೂ ಲಕ್ಷಗಳಲ್ಲಿ |
|---|---|---|
| 1 | 2021-22 | 2500.00 |
| 2 | 2022-23 | 3500.00 |
| 3 | 2023-24 | 7316.65 |
| 4 | 2024-25 | 4240.98 |
| ಒಟ್ಟು | | 17557.63 |

- 2024-25 ನೇ ಸಾಲಿಗೆ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶೌಚಾಲಯ ಮತ್ತು ಇತರೆ ನಿರ್ವಹಣೆಗಾಗಿ ಈ ಕೆಳಕಂಡಂತೆ ಅನುದಾನ ಮಂಜೂರಾಗಿದ್ದು ಈವರೆಗೆ ಒಟ್ಟು ರೂ. 4240.98 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ.

| ಕ್ರಮ ಸಂಖ್ಯೆ | ಮಕ್ಕಳ ಸಂಖ್ಯೆ | ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಸಂಖ್ಯೆ | ಘಟಕ ವೆಚ್ಚ ರೂಗಳಲ್ಲಿ | ನಿಗದಿ ಮಾಡಲಾದ ಒಟ್ಟು ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|---|---|
| 1 | 1-50 | 24234 | 9250 | 2241.64 |
| 2 | 51-100 | 8605 | 14000 | 1204.7 |

| | | | | |
|---|---|---|---|---|
| 3 | 101-500 | 12689 | 17500 | 2220.57 |
| 4 | 501+ | 584 | 22500 | 131.4 |
| ಒಟ್ಟು | | | | 5798.32 |

- 2023-24 ನೇ ಸಾಲಿನಲ್ಲಿ ಮಕ್ಕಳನ್ನು ಶೌಚಾಲಯ ಕಾರ್ಯಕ್ಕೆ ಬಳಸಿಕೊಂಡ 04 ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುತ್ತವೆ. 2024-25ನೇ ಸಾಲಿಗೆ ಮಕ್ಕಳನ್ನು ಶೌಚಾಲಯ ಕಾರ್ಯಕ್ಕೆ ಬಳಸಿಕೊಂಡ ಯಾವುದೇ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. ಮಕ್ಕಳನ್ನು ಶೌಚಾಲಯ ನಿರ್ವಹಣೆ ಕಾರ್ಯಕ್ಕೆ ಬಳಸಿಕೊಂಡ 04 ಪ್ರಕರಣಗಳಲ್ಲಿ ಸಂಬಂಧಿಸಿದ ಶಾಲಾ ಮುಖ್ಯ ಶಿಕ್ಷಕರ ವಿರುದ್ಧ ಶಿಸ್ತು ಪ್ರಾಧಿಕಾರಿಗಳಾದ ಉಪನಿರ್ದೇಶಕರ ಹಂತದಲ್ಲಿ ಶಿಸ್ತು ಕ್ರಮ ಜರುಗಿಸಲಾಗಿದೆ. ರಾಜ್ಯದ ಎಲ್ಲಾ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶೌಚಾಲಯಗಳ ಸ್ವಚ್ಛತೆಯನ್ನು ನಿರ್ವಹಿಸಲು ವಿದ್ಯಾರ್ಥಿಗಳನ್ನು ಬಳಸದಿರುವ ಕುರಿತು ದಿನಾಂಕ:28.12.2023 ರಂದು ಇಲಾಖೆಯಿಂದ ಸುತ್ತೋಲೆ ಹೊರಡಿಸಿ, ಕಟ್ಟುನಿಟ್ಟಿನ ನಿರ್ದೇಶನಗಳನ್ನು ನೀಡಲಾಗಿದೆ.
- ಮುಂದುವರೆದು, 2024-25 ಸಾಲಿಗೆ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಶೌಚಾಲಯ ಮತ್ತು ಇತರೆ ನಿರ್ವಹಣೆಗೆ ಬಿಡುಗಡೆ ಮಾಡಲಾಗಿರುವ ಅನುದಾನವನ್ನು ಉದ್ದೇಶಿತ ಕಾರ್ಯಕ್ಕೆ ಬಳಸಲು ಸೂಚನೆ ನೀಡಲಾಗಿರುತ್ತದೆ.

**ಸಂಖ್ಯೆ: ಇಪಿ 128 ಪಿಎಂಎ 2024.**

**(ಎಸ್. ಮಧು ಬಂಗಾರಪ್ಪ)**

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು